ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಗುಣಮಟ್ಟದ ಶಿಕ್ಷಣಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

125 (212) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 3 ವರ್ಷಗಳಲ್ಲಿ ಮೈಸೂರು ವಿಭಾಗದಲ್ಲಿ ಎಷ್ಟು ಪ್ರಾಥಮಿಕ ಪ್ರೌಢ ಪದವಿಪೂರ್ವ ಶಾಲಾ/ಕಾಲೇಜುಗಳಿಗೆ ಅನುದಾನ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಶಾಲಾ/ಕಾಲೇಜುಗಳು ಸ್ವಂತ ಕಟ್ಟಡವನ್ನು ಹೊಂದಿವೆ;

(ಇ) ಈ ಕಾಲೇಜುಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳ ಅನುಪಾತವನ್ನು ನಿರ್ವಹಿಸಲಾಗಿದೆಯೇ; ಶಿಕ್ಷಣ ಗುಣಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?